ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(5) ಪ್ರಾ.ಶಿ.ಅ/1-5. ಆಂ.ಮಾ.ಪ 01 /2015-16 ದಿನಾಂಕ: 06-10-2015

**-:ಜ್ಞಾ ಪ ನಾ:-**

**ವಿಷಯ** : ಘನ ಸರ್ವೋಚ್ಚ ನ್ಯಾಯಾಲಯದ ಹಾಗೂ ರಾಜ್ಯ ಉಚ್ಚ ನ್ಯಾಯಾಲಯದ ತೀರ್ಪಿನನ್ವಯ, ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮದ ಅಥವಾ ಮಾತೃ ಭಾಷೆಯಲ್ಲಿ ಅನುಮತಿ ಪಡೆದು ಪ್ರಸ್ತುತ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆ ಕೋರಿದ್ದ ಪ್ರಕರಣಗಳಲ್ಲಿ, **ಬೆಂಗಳುರು ಗ್ರಾಮಾಂತರ** ಜಿಲ್ಲೆಗೆ ಸಂಬಂಧಪಟ್ಟಂತೆ, 2015-16 ನೇ ಸಾಲಿನಿಂದ 1-5 ನೇ ತರಗತಿ ಆಂಗ್ಲ ಮಾಧ್ಯಮ ಬೋಧನೆಗೆ ಪರಿವರ್ತನೆ ನೀಡುವ ಬಗ್ಗೆ.

**ಉಲ್ಲೇಖ:** 1. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಸಲ್ಲಿಸಿದ್ದ ಎಸ್.ಎಲ್.ಪಿ.18139-18163 /2008 ಅನ್ನು ಸಿವಿಲ್ ಅಪೀಲ್ ಎಂದು ಪರಿಗಣಿಸಿ ಸಂವಿಧಾನ ಪೀಠಕ್ಕೆ ವರ್ಗಾವಣೆಗೊಂಡ ತರುವಾಯದಲ್ಲಿ ದಿ: 06-05-2014 ರಲ್ಲಿ ಹೊರಟಿರುವ ತೀರ್ಮ.

2. ದಿ: 06.05.2014 ರ ತೀರ್ಪಿನ ಕುರಿತು ಸಲ್ಲಿಸಲಾಗಿದ್ದ ಮರು ಪರಿಶೀಲನಾ ಅರ್ಜಿ ಸಂಖ್ಯೆ: 1878-1911/2014 ರಲ್ಲಿ ದಿ: 09.09.2014 ರಂದು ವಜಾ ಆದೇಶ. ನಂತರದಲ್ಲಿ ರಾಜ್ಯ ಸರ್ಕಾರ ದಾಖಲಿಸಿದ್ದ ಪರಿಹಾರಾತ್ಮಕ ಅರ್ಜಿಯ (Curative Petition) ಆದೇಶ.
3. ಸರ್ಕಾರದ ಅರೆ ಸ.ಪ.ಇಡಿ.263.ಪಿಜಿಸಿ.2015, ದಿನಾಂಕ:2-6-2015.
4. ಈ ಕಛೇರಿ ಏಕಕಡತ ಸಂಖ್ಯೆ: ಸಿ7(3)ಪ್ರಾ.ಶಿ.ಅ/ಭಾಷಾನೀತಿ 19/2014-15ರಲ್ಲಿನ ಸರ್ಕಾರದ ಆದೇಶ ದಿನಾಂಕ: 06-6-2015.
5. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.359.ಪಿಜಿಸಿ.2015, ದಿನಾಂಕ: 5-9-2015.
6. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾ ಜಿಲ್ಲೆ ಇವರು ಸಲ್ಲಿಸಿರುವ ಪ್ರಸ್ತಾವನೆಯ ದಿನಾಂಕ: 27-07-2015, 24-08-2015, 19-09-2015

***********

1994-95 ರಲ್ಲಿ ಜಾರಿಗೊಳಿಸಲಾದ ಭಾಷಾ ನೀತಿ ಕುರಿತಂತೆ ಹಲವು ಸಂಸ್ಥೆಗಳು ಮೊದಲಿಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಿದ ರಿಟ್ ಅರ್ಜಿಯಲ್ಲಿ 2008ರಲ್ಲಿ ತೀರ್ಮ ಹೊರಬಿದ್ದು ನಂತರ ಸರ್ಕಾರವು ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಶೇಷ ರಜಾ ಅರ್ಜಿಯನ್ನು ದಾಖಲಿಸಿ ಅಂತಿಮವಾಗಿ ದಿನಾಂಕ : 06-05-2014 ರಲ್ಲಿ ಘನ ಸರ್ವೋಚ್ಛ ನ್ಯಾಯಾಲಯದ ಸಂವಿಧಾನದ ಪೀಠವು ತೀರ್ಮ ನೀಡಿದ ಮತ್ತು ಕರ್ನಾಟಕ ರಾಜ್ಯ ಘನ ಉಚ್ಚ ನ್ಯಾಯಾಲಯ ಕೆಲವು ಪ್ರಕರಣಗಳಲ್ಲಿ, ನಿಂದನಾ ದಾವೆಯು ಸೇರಿದಂತೆ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಅನುಷ್ಟಾನಗೊಳಿಸುವಂತೆ ಆದೇಶಿಸಿದೆ. ಈ ಹಿನ್ನೆಲೆಯಲ್ಲಿ 01 ರಿಂದ 5ನೇ ತರಗತಿಗೆ ಆಂಗ್ಲ ಮಾಧ್ಯಮದ ಪರಿವರ್ತನೆಗೆ ಸರ್ಕಾರವು ಉಲ್ಲೇಖ-3 ಮತ್ತು 4, 5 ರಲ್ಲಿ ಅನುಮತಿ ನೀಡಿರುತ್ತದೆ.

ಉಲ್ಲೇಖ-6 ರಲ್ಲಿ ಉಪನಿರ್ದೇಶಕರು **ಬೆಂಗಳೂರು ಗ್ರಾಮಾಂತರ ಜಿಲ್ಲೆ** ಇವರಿಂದ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳಲ್ಲಿ ಸದರಿ ಶಾಲೆಗಳು 01 ರಿಂದ 5ನೇ ತರಗತಿಯವರೆಗೆ ಶಾಲೆಯು ಪ್ರಾರಂಭವಾದಾಗಿನಿಂದ ನಿರಂತರವಾಗಿ ನಡೆಯುತ್ತಿದ್ದು, ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆ ನೀಡಬಹುದೆಂದು ಉಪ ನಿರ್ದೇಶಕರು ಅಭಿಪ್ರಾಯ ನೀಡಿದ್ದಾರೆ.

ಸದರಿಯವರ ಅಭಿಪ್ರಾಯ ಮತ್ತು ಉಲ್ಲೇಖದಲ್ಲಿನ ಸರ್ಕಾರದ ಆದೇಶಗಳಂತೆ, ಕೆಳಕಂಡ 06 ಶಾಲೆಗೆ 2015-16ನೇ ಶೈಕ್ಷಣಿಕ ಸಾಲಿನಿಂದ 01 ರಿಂದ 5ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಕೆಳಗಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

1. ಎಲ್ಲಾ ಸಂಸ್ಥೆಗಳಿಂದ ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಾವಳಿಗಳನ್ವಯ ನಮೂನೆ-3 ರಲ್ಲಿ ಅಗತ್ಯ ವಿವರಗಳನ್ನು ನಮೂದಿಸಿ 01 ರಿಂದ 5ನೇ ತರಗತಿ ಕನ್ನಡ ಮಾಧ್ಯಮದ ತರಗತಿಗಳನ್ನು ನಡೆಸಲು ವಿತರಿಸಲಾಗಿದ್ದ ಮೂಲ ನೋಂದಣಿ ಪ್ರಮಾಣ ಪತ್ರವನ್ನು ಉಪನಿರ್ದೇಶಕರು 15 ದಿನಗಳೊಳಗೆ ಪಡೆದು ಸಲ್ಲಿಸಿದ ನಂತರದಲ್ಲಿ ನಮೂನೆ-4 ರಲ್ಲಿ ಆಂಗ್ಲ ಮಾಧ್ಯಮಕ್ಕೆ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು ಶಿಫಾರಸು ಮಾಡಿ ದೃಢೀಕರಿಸಿ ಸಲ್ಲಿಸಿರುವ ವರದಿ ಮತ್ತು ದಾಖಲೆಗಳ ಆಧಾರದ ಮೇಲೆ ಅನುಮತಿಯನ್ನು ನೀಡಲಾಗಿದೆ.
3. ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಾವಳಿಗಳು ಹಾಗೂ ಕಾಲದಿಂದ ಕಾಲಕ್ಕೆ ಹೊರಡಿಸಲಾಗಿರುವ ಆದೇಶ/ ಸುತ್ತೋಲೆಗಳಂತೆ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ಕಡ್ಡಾಯ ಶಿಕ್ಷಣ ಕಾಯ್ದೆ ನಿಯಮಗಳು ಜಾರಿಯಲ್ಲಿದೆ. ಅದರಂತೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಹಾಗೂ ಗುಣಾತ್ಮಕ ಶಿಕ್ಷಣವನ್ನು ಒದಗಿಸತಕ್ಕದ್ದು.
5. ಜಾರಿಯಲ್ಲಿರುವ ಶುಲ್ಕದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಮೂಲಭೂತ ಸೌಲಭ್ಯಗಳ ಕೊರತೆಯನ್ನು ಸಂಸ್ಥೆಯು ಮುಂದಿನ ದಿನಗಳಲ್ಲಿ ಸರಿಪಡಿಸಿಕೊಳ್ಳತಕ್ಕದ್ದು ಹಾಗೂ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಲಾಗುವುದು.
7. ಸಂಸ್ಥೆಯ ಯಾವುದೇ ದಾಖಲೆಗಳ ನೈಜತೆಯ ಬಗ್ಗೆ ವ್ಯತಿರಿಕ್ತ ವರದಿ ಸಲ್ಲಿಕೆಯಾದ ಪ್ರಸಂಗದಲ್ಲಿ ತಪ್ಪು ಮಾಹಿತಿ ಸಲ್ಲಿಕೆಯಾಗಿರುವುದು ಗಮನಕ್ಕೆ ಬಂದಲ್ಲಿ, ತಕ್ಷಣವೆ ಏಕಪಕ್ಷೀಯವಾಗಿ ಹಾಗೂ ಯಾವುದೇ ಸಮಜಾಯಿಷಿಗೆ ಅವಕಾಶ ನೀಡದೇ ಪ್ರಸ್ತುತ ಅನುಮತಿಯನ್ನು ಹಿಂಪಡೆಯುವ ಅಧಿಕಾರವನ್ನು ಕಾಯ್ದಿರಿಸಿಕೊಳ್ಳಲಾಗಿದೆ.
8. ಉಪ ನಿರ್ದೇಶಕರು ಪರಿವರ್ತನೆಯನ್ನು ಪರಿಗಣಿಸಿ ಅಗತ್ಯ ಕ್ರಮಗಳನ್ನು ನಿಯಮಾನುಸಾರ ಕೈಗೊಳ್ಳತಕ್ಕದ್ದು.

| ಕ್ರ.ಸಂ. | ಶಾಲೆಯ ಹೆಸರು |
|---|---|
| 1 | ಡ್ಯಾಫೋಡಿಲ್ ಕಿರಿಯ ಪ್ರಾಥಮಿಕ ಶಾಲೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ |
| 2 | ಶ್ರೀ ವಿದ್ಯಾ ಶಾಲೆ, ಸೂಲಿಬೆಲೆ, ಹೊಸಕೋಟೆ ತಾ: ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 3 | ಕೆ. ಎಂ. ಸಿ ಪ್ರಾಥಮಿಕ ಶಾಲೆ, ಕೊಳತೂರು, ಹೊಸಕೋಟೆ ತಾ: ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 4 | ಮಾಂಟ್ರಿಯಲ್ ಶಾಲೆ, ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 5 | ವಿನಾಯಕ ಶಾಲೆ, ಇಟ್ಟಸಂದ್ರ, ಹೊಸಕೋಟೆ ತಾ: ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 6 | ತಕ್ಷಶಿಲಾ ವಿದ್ಯಾಕೇಂದ್ರ ಶಾಲೆ ಜಡಿಗೇನಹಳ್ಳಿ, ಹೊಸಕೋಟೆ ತಾ: ಬೆಂಗಳೂರು ಗ್ರಾಮಾಂತರ ಜಿಲ್ಲೆ. |

ಉಪ ನಿರ್ದೇಶಕರು ವ್ಯತಿರಿಕ್ತ ಷರಾ ನೀಡಿರುವ ಮತ್ತು ಪರಿವರ್ತನೆಗೆ ಪೂರಕ ದಾಖಲೆಗಳನ್ನು ಸಲ್ಲಿಸದ ಪ್ರಕರಣಗಳಲ್ಲಿ 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಪರಿವರ್ತನೆಗೆ ಪರಿಗಣಿಸಲಾಗಿಲ್ಲ. ಅಂತಹ ಶಾಲೆಗಳ ಪಟ್ಟಿ ಕೆಳಗಿನಂತಿದೆ. ಉಪ ನಿರ್ದೇಶಕರು ಈ ಶಾಲೆಗಳ ಕುರಿತಂತೆ ಪೂರಕವಾದ ದಾಖಲೆ ಹಾಗೂ ವರದಿ ಸಲ್ಲಿಸಿದಲ್ಲಿ ಪುನರ್ ಪರಿಶೀಲಿಸಲಾಗುವುದು.

| ಕ್ರ.ಸಂ. | 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಪರಿವರ್ತನೆಗೆ ಅನುಮತಿ ನೀಡದೇ ಇರುವ ಶಾಲೆಗಳ ಹೆಸರು ಮತ್ತು ವಿಳಾಸ | ಆಕ್ಷೇಪಣೆಗಳು |
|---|---|---|
| 1. | ಭಾರತ್ ಮಾತಾ ಶಾಲೆ, ವಿವೇಕಾನಂದ ನಗರ, ಹೊಸಕೋಟೆ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ | ಅನುಮತಿ ಪಡೆದ ಸ್ಥಳದಲ್ಲಿ ಶಾಲೆಯನ್ನು ನಡೆಸದೇ, ಬೇರೆ ಸ್ಥಳದಲ್ಲಿ ನಡೆಸಲಾಗುತ್ತಿದ್ದು ಇಲಾಖಾ ಅನುಮತಿ ಪಡೆದಿರುವುದಿಲ್ಲೆಂಬುದಾಗಿ ವರದಿ ಇದ್ದು, ಅನುಮತಿಸುವ ಬಗ್ಗೆ ಉಪನಿರ್ದೇಶಕರು ಸ್ಪಷ್ಟ ಅಭಿಪ್ರಾಯ ನೀಡಿರುವುದಿಲ್ಲ |

7/X/15

(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ

1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳುರು ಗ್ರಾಮಾಂತರ ಜಿಲ್ಲೆ,
2. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
3. ಸಂಬಂಧಿಸಿದ ಸಂಸ್ಥೆಗಳ ಕಾರ್ಯದರ್ಶಿಗಳಿಗೆ,
4. ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ,
5. ಹಿರಿಯ ಸಹಾಯಕ ನಿರ್ದೇಶಕರು ಇ-ಆಡಳಿತ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮ ವಹಿಸುವುದು.
6. ಕಛೇರಿ ಪ್ರತಿ.